**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 42/2022**

**ಪ್ರಾ.ಸಾ. :- 06**

| | | |
|---|---|---|
| ಹೆಸರು | : | ಪ್ರಕಾಶ್.ಬಿ.ಎಸ್. |
| ತಂದೆಯ ಹೆಸರು | : | ಸಿದ್ದಯ್ಯ |
| ವಯಸ್ಸು | : | 44 ವರ್ಷ |
| ಉದ್ಯೋಗ | : | ಪೊಲೀಸ್ ನಿರೀಕ್ಷಕರು, ಮೈಸೂರು |
| ವಾಸಸ್ಥಳ | : | ಮೈಸೂರು. |

**ಪ್ರಮಾಣೀಕರಿಸಲಾದ ದಿನಾಂಕಃ- 09.02.2026.**

**<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>**

ನಾನು 2022 ರಿಂದ 2025 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 22.07.2022 ರಂದು ನಾನು ಚಾ.ಸಾ-15 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-5 ಎಂದು ಗುರುತಿಸಲಾಗಿದೆ.

ಅಪಘಾತಕ್ಕೆ ಸಂಬಂಧಿಸಿದಂತೆ ಎರಡೂ ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ

ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದೆ.

ಗಾಯಾಳುವಿನ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ. ಅದನ್ನು ಈಗ ನಿಪಿ-15 ಎಂದು ಗುರುತಿಸಲಾಯಿತು.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**